ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಶಿಥಿಲಗೊಂಡಿರುವ ಸರ್ಕಾರಿ ಶಾಲೆಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

955 (1041) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಶಿಥಿಲಗೊಂಡಿರುವ ಎಷ್ಟು ಸರ್ಕಾರಿ ಶಾಲೆಗಳನ್ನು ಪುನರ್ ನಿರ್ಮಾಣ / ರಿಪೇರಿ ಮಾಡಲಾಗಿದೆ; ಇಲ್ಲಿ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಇದಕ್ಕಾಗಿ ಖರ್ಚು ಮಾಡಲಾಗಿರುವ ಅನುದಾನವೆಷ್ಟು; (ಶಾಲಾವಾರು ಮಾಹಿತಿ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ಶಿಥಿಲಗೊಂಡು ಬಳಕೆಗೆ ಯೋಗ್ಯವಿರದ ಸರ್ಕಾರಿ ಶಾಲೆಗಳೆಷ್ಟು; ಇಂತಹ ಶಾಲಾ-ಕಾಲೇಜುಗಳನ್ನು ನಡೆಸಲು ಬೇರೆ ವ್ಯವಸ್ಥೆ ಕಲ್ಪಿಸಲಾಗಿದೆಯೇ; ಈ ಶಾಲೆಗಳನ್ನು ಪುನರ್ ನಿರ್ಮಾಣ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ಶಾಲಾವಾರು ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳೆಷ್ಟು; ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಶಾಲಾವಾರು ಮಾಹಿತಿ ನೀಡುವುದು)